# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**15.05.2026 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ರಾಜ್ಯದ ಕೈಗಾರಿಕಾ ನೀತಿಯಿಂದ ಹಲವು ವಲಯಗಳಲ್ಲಿ ೨೦ ಲಕ್ಷ ಉದ್ಯೋಗ ಸೃಜಿಸುವ ಗುರಿ - ಮುಖ್ಯಮಂತ್ರಿ ಸಿದ್ದರಾಮಯ್ಯ**

**೨. ಅಕ್ಟೋಬರ್ ೬ ರಂದು ರಾಜ್ಯದ ಅಂತಿಮ ಮತದಾರರ ಪಟ್ಟಿ ಪ್ರಕಟ ; ರಾಜ್ಯದ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಸ್ಪಷ್ಟನೆ**

**೩. ಹೊಸಪೇಟೆ ಬಳಿ ಟ್ರ್ಯಾಕ್ಟರ್ ಉರುಳಿಬಿದ್ದು ೬ ಮಂದಿ ಸಾವು ; ಹಲವರಿಗೆ ಗಾಯ**

**೪. ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ - ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ**

**<><*<><>*><>**

ರಾಜ್ಯದ ಆರ್ಥಿಕ ಪ್ರಗತಿಯು ಜನರ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಉನ್ನತ ಶಿಕ್ಷಣ ಇಲಾಖೆಯ ಕ್ಯಾಂಪಸ್ ಟು ಕೆರಿಯರ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣವು ರಾಜ್ಯ ಸರ್ಕಾರದ ಆದ್ಯತಾ ವಲಯವಾಗಿದೆ. ಪ್ರತಿ ಲಕ್ಷ ಜನಸಂಖ್ಯೆಗೆ ೬೬ ಕಾಲೇಜುಗಳನ್ನು ಹೊಂದುವ ಮೂಲಕ ದೇಶದಲ್ಲಿಯೇ ಮುಂಚೂಣಿಯಲ್ಲಿರುವ ಕರ್ನಾಟಕ ರಾಜ್ಯದ ಉನ್ನತ ಶಿಕ್ಷಣದ ಪರಿಸರ ವ್ಯವಸ್ಥೆಯ ಆಳ ಮತ್ತು ಅಗಲಕ್ಕೆ ಹಿಡಿದ ಕೈಗನ್ನಡಿಯಾಗಿದೆ ಎಂದು ತಿಳಿಸಿದ್ದಾರೆ. ಕ್ಯಾಂಪಸ್‌ನಿಂದ ವೃತ್ತಿ ಜೀವನಕ್ಕೆ ಆಗುವ ಪರಿವರ್ತನೆ ಸುಗಮವಾಗಿರಬೇಕು. ವಿಶ್ವವಿದ್ಯಾಲಯಗಳು, ಉದ್ಯೋಗವಾಕಾಶ, ಉದ್ಯಮಶೀಲತೆ, ನಾವೀನ್ಯತೆ ಮತ್ತು ನಾಯಕತ್ವದ ಎಂಜಿನ್ ಗಳಾಗಬೇಕು ಎಂದು ಕರೆ ನೀಡಿದ್ದಾರೆ. ರಾಜ್ಯದ ಕೈಗಾರಿಕಾ ನೀತಿಯು ಉತ್ಪಾದನೆ, ಸೇವೆಗಳು, ಶುದ್ಧ ತಂತ್ರಜ್ಞಾನ ಮತ್ತು ಉದ್ಯಯೋನ್ಮುಖ ವಲಯಗಳಲ್ಲಿ ೨೦ ಲಕ್ಷ ಉದ್ಯೋಗ ಸೃಜಿಸುವ ಗುರಿ ಹೊಂದಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ (  ೩೩ ಸೆಕೆಂಡ್ಸ್)

<><*<><>*><>

ರಾಜ್ಯದಲ್ಲಿ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಹಿನ್ನೆಲೆಯಲ್ಲಿ ಜೂನ್ ೩೦ರಿಂದ ಜುಲೈ ೨೯ರವರೆಗೆ ಮನೆ ಮನೆಗೆ ಭೇಟಿ ನೀಡಿ, ಪರಿಷ್ಕರಣೆ ಮಾಡಲಾಗುವುದು ಎಂದು ಕರ್ನಾಟಕದ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮತದಾರರ ಪಟ್ಟಿಯಲ್ಲಿ ಸೇರಲು ೧೮ ವರ್ಷ ಪೂರ್ಣವಾಗಿರಬೇಕು. ಅಕ್ಟೋಬರ್ ೭ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸುವುದಾಗಿ ಮಾಹಿತಿ ನೀಡಿದ್ದಾರೆ. ಎಸ್ಐಆರ್ ಪ್ರಕ್ರಿಯೆಗೆ ರಾಜ್ಯದಲ್ಲಿ ೨೫ ಸಾವಿರದ ೨೮೪ ಬೂತ್ ಮಟ್ಟದ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಬೆಂಗಳೂರಿನಲ್ಲಿ ಪೆಟ್ರೋಲ್ ದರ ಒಂದು ಲೀಟರ್‌ಗೆ ೧೦೬ ರೂಪಾಯಿ ದಾಟಿದೆ. ಡೀಸೆಲ್ ದರ ೯೪ ರೂಪಾಯಿಯಾಗಿದೆ. ಇದರಿಂದ ಜನಸಾಮಾನ್ಯರು ದೈನಂದಿನ ಬದುಕು ನಡೆಸುವುದು ಮತ್ತಷ್ಟು ದುಸ್ತರವಾಗಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ತೈಲಬೆಲೆ ಏರಿಕೆ ಭಾರತದ ಸಾಮಾನ್ಯ ಜನರ ದೈನಂದಿನ ಬದುಕಿನ ಮೇಲೆ ನಡೆಸಿದ ನೇರ ದಾಳಿಯಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಹಣದುಬ್ಬರ ನಿಯಂತ್ರಣ ಮಾಡುವಲ್ಲಿ ಡಾಲರ್ ಎದುರು ರೂಪಾಯಿ ಮೌಲ್ಯ ಕುಸಿತ ತಡೆಯುವಲ್ಲಿ ಹಾಗೂ ದೇಶ ಆರ್ಥಿಕ ನಿರ್ವಹಣೆಯಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಕೇಳುಗರು ಮತ್ತು ಆಕಾಶವಾಣಿ ಕೇಂದ್ರಗಳ ನಡುವಿನ ಕೊಂಡಿಯಂತೆ ಉದ್ಘೋಷಕರು ಕಾರ್ಯನಿರ್ವಹಿಸುತ್ತಾರೆ ಎಂದು ಭಾರತ ಸರ್ಕಾರದ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಜಂಟಿಕಾರ್ಯದರ್ಶಿ ಪ್ರಿತುಲ್ ಕುಮಾರ್ ಅಭಿಪ್ರಾಯಪಟ್ಟಿದ್ದಾರೆ. ಮಡಿಕೇರಿ ಆಕಾಶವಾಣಿ ಎಫ್.ಎಂ. ಕೇಂದ್ರಕ್ಕೆ ಭೇಟಿ ನೀಡಿದ ಅವರು, ಕೇಂದ್ರದ ಕಾರ್ಯಚಟುವಟಿಕೆಗಳನ್ನು ಪರಿಶೀಲಿಸಿದರು. ಉದ್ಘೋಷಕರು ಮತ್ತು ಇತರ ಸಿಬ್ಬಂದಿಯೊಂದಿಗೆ ಪ್ರಿತುಲ್ ಕುಮಾರ್ ಸಂವಾದ ಮಾಡಿದರು. ಆಕಾಶವಾಣಿ ಮಡಿಕೇರಿ ಕೇಂದ್ರ ಪ್ರಸಾರ ಮಾಡುತ್ತಿರುವ ವಿವಿಧ ಕಾರ್ಯಕ್ರಮಗಳು ಹಾಗೂ ಆದಾಯ ಗಳಿಕೆಯಲ್ಲಿಯೂ ಮುಂದಿರುವ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದರು.

<><*<><>*><>

ಹೊಸಪೇಟೆ ಬಳಿಯ ತುಂಗಭದ್ರಾ ಜಲಾಶಯದ ಸೇತುವೆ ಮೇಲಿಂದ ಟ್ರ್ಯಾಕ್ಟರ್ ಉರುಳಿಬಿದ್ದು, ೬ ಮಂದಿ ಸಾವನ್ನಪ್ಪಿದ್ದಾರೆ. ವಿಜಯನಗರದಿಂದ ಹುಲಿಗೆಮ್ಮ ದೇವಿ ದೇವಸ್ಥಾನಕ್ಕೆ ತೆರಳುತ್ತಿದ್ದ ಸಂಡೂರು ತಾಲೂಕಿನ ಯಶವಂತ ನಗರ ಹಾಗೂ ಕೂಡ್ಲಿಗಿ ತಾಲೂಕಿನ ಮರ್ಲಾಯನಹಳ್ಳಿ ಗ್ರಾಮದ ನಿವಾಸಿಗಳು ಟ್ರ್ಯಾಕ್ಟರ್ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ಅಪಘಾತದಲ್ಲಿ ಹತ್ತಕ್ಕೂ ಹೆಚ್ಚು ಜನರಿಗೆ ಗಾಯಗಳಾಗಿವೆ. ಆಸ್ಪತ್ರೆಗೆ ಭೇಟಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾನವಿ ಪರಿಶೀಲನೆ ನಡೆಸಿದ್ದಾರೆ.

<><*<><>*><>

ರಾಜ್ಯದ ಸರ್ಕಾರಿ ಶಾಲೆ, ಕಾಲೇಜುಗಳಲ್ಲಿ ಖಾಲಿ ಇರುವ ಶಿಕ್ಷಕರು ಹಾಗೂ ಉಪನ್ಯಾಸಕರುಗಳ ಹುದ್ದೆಗಳನ್ನು ಕೂಡಲೆ ಭರ್ತಿ ಮಾಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ಎಲ್ ಭೋಜೇಗೌಡ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶೇಕಡ ೫೦ರಷ್ಟು ಶಿಕ್ಷಕರೆ ಇಲ್ಲ. ಹೀಗಿದ್ದಾಗ ಗುಣಮಟ್ಟದ ಶಿಕ್ಷಣ ನೀಡಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ. ಇನ್ನು ರಾಜ್ಯದಲ್ಲಿ ೧ ಸಾವಿರದ ೩೪೦ ಪದವಿ ಪೂರ್ವ ಕಾಲೇಜುಗಳಿವೆ. ಪ್ರಸ್ತುತ ೮ ಸಾವಿರದ ೬೪೪ ಉಪನ್ಯಾಸಕರು ಕಾರ್ಯ ನಿರ್ವಹಿಸುತ್ತಿದ್ದು ೫ ಸಾವಿರದ ೨೬೯ ಹುದ್ದೆಗಳು ಖಾಲಿಯಿದ್ದು, ಸರ್ಕಾರ ಈ ಹುದ್ದೆಗಳ ಭರ್ತಿಗೂ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

<><*<><>*><>

ಮುಂಗಾರು ಹಂಗಾಮು ಪ್ರಾರಂಭವಾಗಿದ್ದು, ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ದಾಸ್ತಾನು ಇಡಲು ಕ್ರಮವಹಿಸುವಂತೆ ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲೆಯ ೨೦೧೬-೧೭ರ ಮುಂಗಾರು ಹಂಗಾಮಿನ ರಸಗೊಬ್ಬರಗಳ ಸಮರ್ಪಕ ಸರಬರಾಜು ಮತ್ತು ವಿತರಣೆ ಕುರಿತು ಸಭೆ ನಡೆಸಿ ಮಾತನಾಡಿದ ಅವರು, ಗುಣಮಟ್ಟದ ಬಿತ್ತನೆ ಬೀಜಗಳ ವಿತರಣೆಗೆ ಅಗತ್ಯ ಕ್ರವಹಿಸಬೇಕು ಎಂದು ತಿಳಿಸಿದ್ದಾರೆ. ರಸಗೊಬ್ಬರ ಮಳಿಗೆಗಳಲ್ಲಿ ರಸಗೊಬ್ಬರಗಳ ದಾಸ್ತಾನು ಹಾಗೂ ದರಪಟ್ಟಿಯನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು. ರಸಗೊಬ್ಬರ ಅಭಾವ ಸೃಷ್ಟಿಯಾಗದಂತೆ ನೋಡಿಕೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

<><*<><>*><>

ರಾಜ್ಯದಲ್ಲಿ ಪಿಂಚಣಿ ವಿಲೇವಾರಿ ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಡಿಜಿಟಲೀಕರಣಗೊಳಿಸಲು ಸಿದ್ಧತೆ ನಡೆಸಲಾಗುತ್ತಿದ್ದು, ಶೀಘ್ರದಲ್ಲೇ ಹೊಸ ವ್ಯವಸ್ಥೆ ಜಾರಿಗೆ ಬರಲಿದೆ ಎಂದು ಖಜಾನೆ ಇಲಾಖೆಯ ಡೆಪ್ಯುಟಿ ಅಕೌಂಟ್ ಜನರಲ್ ಸಚಿನ್ ಕೃಷ್ಣ ಕೌಶಿಕ್ ತಿಳಿಸಿದ್ದಾರೆ. ಬಳ್ಳಾರಿಯಲ್ಲಿ ಇಂದು ಖಜಾನೆ ಇಲಾಖೆ ಆಯೋಜಿಸಿದ್ದ ಪಿಂಚಣಿ, ಸಾಮಾನ್ಯ ಭವಿಷ್ಯ ನಿಧಿ ಅದಾಲತ್ ಹಾಗೂ ಲೆಕ್ಕಪತ್ರ ಸಮಸ್ಯೆಗಳ ಕುರಿತು ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪಿಂಚಣಿ ಮಂಜೂರಾತಿ ಪ್ರಕ್ರಿಯೆಯನ್ನು ವೇಗಗೊಳಿಸಲಾಗಿದ್ದು, ಗರಿಷ್ಠ ೩೦ ರಿಂದ ೪೫ ದಿನಗಳೊಳಗೆ ವಿಲೇವಾರಿ ಮಾಡಲು ಪ್ರಯತ್ನಿಸಲಾಗುತ್ತಿದೆ ಎಂದು ಹೇಳಿದ್ದಾರೆ.

**<><*<><>*><>**

ರೈಲ್ವೆ ಮಂಡಳಿಯು ಎಸ್‌ಎಸ್‌ಎಸ್ ಹುಬ್ಬಳ್ಳಿ ಮತ್ತು ಯೋಗ ನಗರಿ ಋಷಿಕೇಶ ನಡುವಿನ ವಿಶೇಷ ಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಈಗ ಕಾಯಂ ಸೇವೆಯನ್ನಾಗಿ ಪರಿವರ್ತಿಸಿದೆ ಎಂದು ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ. ಮಂಜುನಾಥ್ ಕನಮಡಿ ತಿಳಿಸಿದ್ದಾರೆ. ಈ ರೈಲುಗಳು ಇನ್ನು ಮುಂದೆ ಅಧಿಕೃತ ರೈಲು ಸಂಖ್ಯೆಗಳೊಂದಿಗೆ ಸಂಚರಿಸಲಿವೆ. ಈ ಕ್ರಮದಿಂದ ಕರ್ನಾಟಕ, ಮಹಾರಾಷ್ಟ್ರ, ಮಧ್ಯಪ್ರದೇಶ, ಉತ್ತರ ಪ್ರದೇಶ, ದೆಹಲಿ ಹಾಗೂ ಉತ್ತರಾಖಂಡ ರಾಜ್ಯಗಳ ನಡುವೆ ಪ್ರಯಾಣಿಸುವ ದೂರದೂರಿನ ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ.

**<><*<><>*><>**

ಇನ್ನು ಹವಾವರ್ತಮಾನ,

ಕರಾವಳಿಯಲ್ಲಿ ವ್ಯಾಪಕವಾಗಿ ಮಳೆಯಾಗಿದ್ದು, ಉತ್ತರ ಒಳನಾಡು ಹಾಗೂ ದಕ್ಷಿಣ ಒಳನಾಡಿನ ಹಲವೆಡೆ ಮಳೆಯಾಗಿದೆ. ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ ಉಂಟಾಗಿರುವ ಹಿನ್ನೆಲೆಯಲ್ಲಿ ರಾಜ್ಯದ ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಮಳೆಯಾಗಲಿದೆ. ಪ್ರಮುಖವಾಗಿ ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು, ಮೈಸೂರು, ಚಾಮರಾಜನಗರ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಯೂ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಮುನ್ನೆಚ್ಚರಿಕೆ ನೀಡಿದ್ದಾರೆ.

**ಧ್ವನಿ: ಸಿ.ಎಸ್.ಪಾಟೀಲ್ ( ೩೦ ಸೆಕೆಂಡ್ಸ್)**

**<><*<><>*><>**

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಮಾವು ಮತ್ತು ಹಲಸು ಮಾರಾಟ ಮೇಳ ಆರಂಭವಾಗಿದೆ. ತೋಟಗಾರಿಕೆ ಇಲಾಖೆ ಆಯೋಜಿಸಿರುವ ಮಾವು ಮೇಳದಲ್ಲಿ ವಿವಿಧ ರೀತಿಯ ಮಾವು ಹಾಗೂ ಹಲಸಿನ ಹಣ್ಣುಗಳು ಗ್ರಾಹಕರನ್ನು ಸೆಳೆಯುತ್ತಿದೆ. ಮಧ್ಯವರ್ತಿಗಳಿಗೆ ಅವಕಾಶವಿಲ್ಲದೆ ಮಾವು ಬೆಳೆಯುವ ರೈತರು ಹಾಗೂ ಗ್ರಾಹಕರ ನಡುವೆ ನೇರ ಸಂಪರ್ಕ ಕಲ್ಪಿಸಲು ಉತ್ತಮ ಮಾರುಕಟ್ಟೆ ವ್ಯವಸ್ಥೆ ರೂಪಿಸಲಾಗಿದೆ. ಮಾವು ಬೆಳೆಯುವ ರೈತರಿಗೆ ನಷ್ಟವಿಲ್ಲದಂತೆ ಗ್ರಾಹಕರಿಗೆ ಉತ್ತಮ ಬೆಲೆಯಲ್ಲಿ ಖರೀದಿಸಲು ತೋಟಗಾರಿಕೆ ಇಲಾಖೆ ಮೇಳ ಆಯೋಜಿಸಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**